# ಮಂಗಳೂರು ವಿಶ್ವವಿದ್ಯಾನಿಲಯ

ಸಂಖ್ಯೆ:ಮಂ.ವಿ./ಪ.ವಿ./ಸಿ.ಆರ್.06/2022-23/ಬಿ.ಎಡ್./ಇ.14

ಕುಲಸಚಿವ (ಪರೀಕ್ಷಾಂಗ)ರ ಕಛೇರಿ,
ಮಂಗಳಗಂಗೋತ್ರಿ - 574 199.

ದಿನಾಂಕ: 03.07.2023

**ಪರೀಕ್ಷಾ ಪ್ರಕಟಣೆ**

2023ರ ಆಗಸ್ಟ್ ತಿಂಗಳಿನಲ್ಲಿ ನಡೆಯಲಿರುವ ಬಿ.ಎಡ್. ಪದವಿಯ ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ನ ನಿಯಮಿತ / ಪುನರಾವರ್ತಿತ ಪರೀಕ್ಷೆಗಳು ದಿನಾಂಕ **14.08.2023ರಿಂದ** ಪ್ರಾರಂಭವಾಗಲಿರುವುದು ಎಂಬುದನ್ನು ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರುಗಳ ಮತ್ತು ಸದರಿ ಪರೀಕ್ಷೆಗಳಿಗೆ ಹಾಜರಾಗುವ ಎಲ್ಲಾ ವಿದ್ಯಾರ್ಥಿ/ಅಭ್ಯರ್ಥಿಗಳ ಗಮನಕ್ಕೆ ಈ ಮೂಲಕ ತರಲಾಗಿದೆ.

**ಸೂಚನೆಗಳು:**

ಮೇಲಿನ ಸೆಮಿಸ್ಟರ್ ನಿಯಮಿತ ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳು ಎಲ್ಲಾ ವಿಷಯಗಳಿಗೆ/ಪತ್ರಿಕೆಗಳಿಗೆ ಕಡ್ಡಾಯವಾಗಿ **UUCMS Portal** ನಲ್ಲಿ ನೋಂದಣಿ ಮಾಡತಕ್ಕದ್ದು. ಹಾಗೂ ಸಂಬಂಧಿಸಿದ ಪರೀಕ್ಷಾ ಶುಲ್ಕವನ್ನು Online ನಲ್ಲಿಯೇ **UUCMS Portal** ನ ಮುಖಾಂತರ ಪಾವತಿಸತಕ್ಕದ್ದು. ಪ್ರಥಮ ಬಾರಿಗೆ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ಎಲ್ಲಾ ವಿಷಯಗಳಿಗೆ/ಪತ್ರಿಕೆಗಳಿಗೆ ಕಡ್ಡಾಯವಾಗಿ ನೋಂದಣಿ ಮಾಡತಕ್ಕದ್ದು.

ಪ್ರಥಮ ಮತ್ತು ತೃತೀಯ ಸೆಮಿಸ್ಟರ್ **ಪುನರಾವರ್ತಿತ** ವಿದ್ಯಾರ್ಥಿಗಳು ಪರೀಕ್ಷೆಗಳಿಗೆ ಈ ಕೆಳಗಿನಂತೆ ನೋಂದಾಯಿಸತಕ್ಕದ್ದು.

- 2021-22ನೇ ಸಾಲಿಗಿಂತ ಮೊದಲು ಪ್ರವೇಶಾತಿ ಪಡೆದ (MuLinx ಬ್ಯಾಚ್‌ನ) ವಿದ್ಯಾರ್ಥಿಗಳ ಅರ್ಜಿಯನ್ನು MuLinx Portalನಲ್ಲಿ ನೋಂದಾಯಿಸಿ, ಪರೀಕ್ಷಾ ಶುಲ್ಕವನ್ನು ಬ್ಯಾಂಕ್ ಚಲನ್ ಮೂಲಕ ಪಾವತಿಸತಕ್ಕದ್ದು.
- 2021-22 ಹಾಗೂ ನಂತರ ಪ್ರವೇಶಾತಿ ಪಡೆದ (**UUCMS** ಬ್ಯಾಚ್‌ನ) ವಿದ್ಯಾರ್ಥಿಗಳ ಅರ್ಜಿಯನ್ನು **UUCMS Portal** ನಲ್ಲಿ ನೋಂದಾಯಿಸಿ, ಶುಲ್ಕವನ್ನು ಆನ್-ಲೈನ್‌ನಲ್ಲಿಯೇ **UUCMS Portal** ಮೂಲಕ ಪಾವತಿಸತಕ್ಕದ್ದು.
- **UUCMS Portal ನಲ್ಲಿ Online/Offline ನಲ್ಲಿ ಶುಲ್ಕ ಪಾವತಿಸಿದ (Report) ಪ್ರತಿಯನ್ನು ಪ್ರಾಂಶುಪಾಲರು ಧೃಢೀಕರಿಸಿ ಕುಲಸಚಿವರು (ಪರೀಕ್ಷಾಂಗ) ರ ಕಛೇರಿಗೆ ನಿಗಧಿತ ಸಮಯದೊಳಗೆ ತಪ್ಪದೆ ಕಳುಹಿಸಿಕೊಡುವುದು**

3. ಸವಿವರವಾದ ವೇಳಾಪಟ್ಟಿಯನ್ನು ಶೀಘ್ರದಲ್ಲಿ ಪ್ರಕಟಿಸಲಾಗುವುದು.

4. ಪ್ರಾಯೋಗಿಕ ಪರೀಕ್ಷೆಗಳು ಲಿಖಿತ ಪರೀಕ್ಷೆಗಳಿಗಿಂತ ಮುಂಚಿತವಾಗಿ ನಡೆಯಲಿರುವುದು.

5. ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕ ರೂ. 120.00 (ರೂಪಾಯಿ ನೂರ ಇಪ್ಪತ್ತು)ನ್ನು ಕಾಲೇಜು ಮುಖ್ಯಸ್ಥರಲ್ಲಿ ಪಾವತಿಸಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದು.

6. ***ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಹಾಗೂ ಸದ್ರಿ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಶುಲ್ಕ ಪಾವತಿಸಿದ ರಶೀದಿ/ಚಲನ್‌ನನ್ನು ಪ್ರತ್ಯೇಕವಾಗಿ ಎಲ್ಲಾ ವಿವರಗಳನ್ನೊಳಗೊಂಡ ಮಾಹಿತಿಯೊಂದಿಗೆ ಸಲ್ಲಿಸತಕ್ಕದ್ದು.***

7. *ಕುಲಸಚಿವರಿಂದ ಪ್ರವೇಶಾತಿ ಮತ್ತು ವರ್ಗಾವಣೆ ಪ್ರವೇಶಾತಿ ಅನುಮೋದಿಸಲ್ಪಡದ ವಿದ್ಯಾರ್ಥಿಗಳು ಮತ್ತು ಕಡಿಮೆ ಹಾಜರಾತಿ ಪಡೆದ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ಅನರ್ಹರಾಗಿರುತ್ತಾರೆ.* ಪ್ರವೇಶಾವಕಾಶವು ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾನಿಲಯದಿಂದ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟ ಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚಿಗೆಯಾಗಿ ಕಾಲೇಜಿಗೆ ಅಥವಾ ವ್ಯಾಸಂಗ ಕ್ರಮಕ್ಕೆ ಪ್ರವೇಶ ಪಡೆದಿರುವ ಯಾವೊಬ್ಬ ವಿದ್ಯಾರ್ಥಿಯೂ, ಕಾಲೇಜು ಅಥವಾ ವಿಶ್ವವಿದ್ಯಾನಿಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಅಲ್ಲದೆ ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು

**ಅರ್ಹರಲ್ಲದ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸುವಂತಿಲ್ಲ. ಅಂತಹ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಪರೀಕ್ಷೆ ಕೂಡಾ ನಡೆಸಬಾರದು.**

8. ವಿದ್ಯಾರ್ಥಿಗಳಿಗೆ ಇಚ್ಛೆ ಬಂದಂತೆ ಪರೀಕ್ಷಾ ಕೇಂದ್ರವನ್ನು ಆರಿಸಲು ಅವಕಾಶವಿರುವುದಿಲ್ಲ.

9. *ವಿಶ್ವವಿದ್ಯಾನಿಲಯದ ವಿನಿಯಮಾವಳಿ (ರೆಗ್ಯುಲೇಶನ್) ಪ್ರಕಾರ ಪರೀಕ್ಷೆಗೆ ಹಾಜರಾಗಲು ಅರ್ಹತೆಯನ್ನು ಹೊಂದಿದ ವಿದ್ಯಾರ್ಥಿಗಳಿಗೆ ಮಾತ್ರ ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಯನ್ನು ಸಲ್ಲಿಸಲು ಅನುಮತಿಯನ್ನು ನೀಡಲಾಗಿದೆ.* ***ವಿಶ್ವವಿದ್ಯಾನಿಲಯದ ತಿದ್ದುಪಡಿ ವಿನಿಯಮದ ಪ್ರಕಾರ 2015 ಹಾಗೂ ಅದರ ಹಿಂದಿನ ಸಾಲಿನ ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ವಿಶೇಷ ಪರೀಕ್ಷಾ ಶುಲ್ಕವನ್ನು ಪಾವತಿಸಿ, ಪರೀಕ್ಷೆಗಳಿಗೆ ಹಾಜರಾಗಲು ಅರ್ಹರಾಗಿರುತ್ತಾರೆ.*** ಸದ್ರಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವುದು. ಇಲ್ಲವಾದಲ್ಲಿ ಕಾಲೇಜಿನ ಪ್ರಾಂಶುಪಾಲರೇ ಜವಾಬ್ದಾರರಾಗುವರು.

10. ಇನ್ನಿತರ ಕಾರ್ಯ ಚಟುವಟಿಕೆಗಳಲ್ಲಿ ಭಾಗವಹಿಸಿರುವುದರಿಂದಾಗಿ (ಕಾಲೇಜು ಮತ್ತು ವಿಶ್ವವಿದ್ಯಾನಿಲಯವನ್ನು ಪ್ರತಿನಿಧಿಸಿ) ಕಾಲೇಜುಗಳಲ್ಲಿ ಹಾಜರಿಲ್ಲದ ವಿದ್ಯಾರ್ಥಿಗಳು ಕೂಡಾ ನಿಗದಿತ ಶುಲ್ಕದೊಂದಿಗೆ ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಯನ್ನು ಸಲ್ಲಿಸುವಂತೆ (ಇತರ ವಿದ್ಯಾರ್ಥಿಗಳೊಂದಿಗೆ) ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರುಗಳು ನಿಗಾವಹಿಸತಕ್ಕದ್ದು.

11. *ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳ ಪರೀಕ್ಷಾ ಹಣಕಾಸು ತಖ್ತೆ ಹಾಗೂ ಪರೀಕ್ಷಾರ್ಥಿಗಳ ಪಟ್ಟಿಯನ್ನು ಅನುಮೋದಿಸಲ್ಪಟ್ಟ ಪ್ರವೇಶಾನುಮೋದನೆ ಪಟ್ಟಿಯಲ್ಲಿ ಸೂಚಿಸಿರುವ ಮಾದರಿಯಲ್ಲಿ ಯಾವುದೇ ಕಾಗುಣಿತ ವ್ಯತ್ಯಾಸವಿಲ್ಲದಂತೆ ದಾಖಲಿಸಬೇಕು.*

12. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು (ದಂಡಶುಲ್ಕ ರಹಿತ ಮತ್ತು ವಿವಿಧ ದರಗಳಲ್ಲಿ ದಂಡಶುಲ್ಕ ಸಹಿತ) ಕಾಲೇಜಿನ ಮುಖ್ಯಸ್ಥರಲ್ಲಿ ಪಾವತಿ ಮಾಡಲು ಈ ಕೆಳಕಂಡ ದಿನಾಂಕಗಳನ್ನು ನಿಗದಿಪಡಿಸಲಾಗಿದೆ.

**ಪರೀಕ್ಷಾ ಶುಲ್ಕವನ್ನು ಕಟ್ಟಲು ನಿಗದಿಪಡಿಸಲಾದ ಅಂತಿಮ ದಿನಾಂಕ:**

| | | |
|---|---|---|
| ದಂಡಶುಲ್ಕ ರಹಿತ | . . . | **20.07.2023** |
| ದಂಡಶುಲ್ಕ ದಿನವೊಂದಕ್ಕೆ ರೂ. 55/- ರಂತೆ | . . . | **21.07.2023 ರಿಂದ 24.07.2023ರವರೆಗೆ** |
| ದಂಡಶುಲ್ಕ ದಿನವೊಂದಕ್ಕೆ ರೂ. 110/- ರಂತೆ | . . . | **25.07.2023 ರಿಂದ 26.07.2023ರವರೆಗೆ** |

13. ಒಮ್ಮೆ ಪಾವತಿಸಲಾದ ಪರೀಕ್ಷಾ ಶುಲ್ಕವನ್ನು ಯಾವ ಕಾರಣಕ್ಕೂ ಮರುಪಾವತಿ ಮಾಡಲಾಗುವುದಿಲ್ಲ ಹಾಗೂ ಅದನ್ನು ಮುಂದಿನ ಪರೀಕ್ಷೆಗಳಿಗೆ ಸರಿದೂಗಿಸಿಕೊಳ್ಳಲಾಗುವುದಿಲ್ಲ.

14. *ಆಗಸ್ಟ್ 2022ರ ಪರೀಕ್ಷೆಯ ಫಲಿತಾಂಶ ಪ್ರಕಟವಾಗದ ವಿದ್ಯಾರ್ಥಿಗಳು, ಚ್ಯಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಹಾಗೂ ಫಲಿತಾಂಶ ಪ್ರಕಟವಾಗಲು ಬಾಕಿ ಇರುವ ವಿದ್ಯಾರ್ಥಿಗಳು ಸಹ ಪರೀಕ್ಷೆಗೆ ನಿಗದಿಪಡಿಸಿದ ದಿನಾಂಕದೊಳಗಾಗಿ ಪರೀಕ್ಷಾ ಶುಲ್ಕದೊಂದಿಗೆ ಅಭ್ಯರ್ಥನ ಪತ್ರವನ್ನು ಸಲ್ಲಿಸತಕ್ಕದ್ದು. ಯಾವುದೇ ಕಾರಣಕ್ಕೂ ಅಂತಹ ಅಭ್ಯರ್ಥಿಗಳಿಗೆ ಪಾವತಿ ದಿನಾಂಕವನ್ನು ಮುಂದೂಡಲಾಗುವುದಿಲ್ಲ. ಪರೀಕ್ಷಾ ಅವ್ಯವಹಾರಗಳಲ್ಲಿ ಭಾಗಿಯಾಗಿ, ವಿಶ್ವವಿದ್ಯಾನಿಲಯದ ನಿರ್ಣಯ ಬಾಕಿ ಇರುವಂತಹ ಅಭ್ಯರ್ಥಿಗಳು ಸಹ ನಿಗದಿತ ಸಮಯದೊಳಗೆ ಶುಲ್ಕವನ್ನು ಪಾವತಿಸಬೇಕು ಮತ್ತು ಅಭ್ಯರ್ಥನ ಪತ್ರವನ್ನು ಸಲ್ಲಿಸಬೇಕು.*

15. ಅಭ್ಯರ್ಥಿಗಳು ತಮ್ಮ ಪರೀಕ್ಷಾ ಶುಲ್ಕವನ್ನು ಕಾಲೇಜು ಆಫೀಸಿನಲ್ಲಿ ಪಾವತಿಸಬೇಕು ಮತ್ತು ಆನ್‌ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸಬೇಕು. ಶುಲ್ಕವನ್ನು ಪಾವತಿಸಿದ ಬಗ್ಗೆ ಪಡೆದ ರಶೀದಿಯನ್ನು ಪ್ರತ್ಯೇಕವಾಗಿ ಕಳುಹಿಸಿ ಕೊಡಬೇಕು ಹಾಗೂ ಮೊಬಲಗು, ದಿನಾಂಕ ಮತ್ತು ರಶೀದಿ ಸಂಖ್ಯೆಗಳನ್ನು ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ಸವಿವರವಾಗಿ ನಮೂದಿಸಬೇಕು.

. . . 2

16. **ಪರೀಕ್ಷಾ ಶುಲ್ಕದ ದರ :**

ಪೂರ್ಣ ಪರೀಕ್ಷೆಗೆ . . . **ರೂ. 600.00**

ವಿಷಯವೊಂದಕ್ಕೆ . . . **ರೂ. 180.00**

17. ವಿದ್ಯಾರ್ಥಿಗಳು ಪರೀಕ್ಷೆಯ ಯಾವುದಾದರೂ ಭಾಗ/ ಭಾಗಗಳಿಗೆ ಪಾವತಿಸಲಿರುವ ಒಟ್ಟು ಪರೀಕ್ಷಾ ಶುಲ್ಕವು ನಿಗದಿತ ಪೂರ್ಣ ಪರೀಕ್ಷಾ ಶುಲ್ಕವನ್ನು ಮೀರಬಾರದು.

18. ವಿದೇಶಿ ಅಭ್ಯರ್ಥಿಗಳು ನಿಗದಿಪಡಿಸಿದ ಪರೀಕ್ಷಾ ಶುಲ್ಕದ ಮೂರು ಪಟ್ಟು ಶುಲ್ಕವನ್ನು ಪಾವತಿಸತಕ್ಕದ್ದು.

19. ಮೇಲೆ ನಿಗದಿಪಡಿಸಿದ ಪರೀಕ್ಷಾ ಶುಲ್ಕದ ಜೊತೆಗೆ ಪ್ರತೀ ಪರೀಕ್ಷೆಗೆ ರೂ.230.00 ಅಂಕಪಟ್ಟಿ ಶುಲ್ಕ ಮತ್ತು ರೂ. 120.00 ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕಗಳನ್ನು ಪಾವತಿಸತಕ್ಕದ್ದು.

20. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ / ವರ್ಗ-1 ಹಾಗೂ ಕುಟುಂಬದ ವಾರ್ಷಿಕ ವರಮಾನ ರೂ.1,00,000/- ಆದಾಯ ಮಿತಿಯೊಳಗಿರುವ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕ ವಿನಾಯಿತಿ ನೀಡಿದ ಬಗ್ಗೆ ಸರ್ಕಾರಕ್ಕೆ ಕ್ಲೇಮು ಸಲ್ಲಿಸಿದ ಬಿಲ್ಲಿನ ಪ್ರತಿಯನ್ನು ಸಲ್ಲಿಸತಕ್ಕದ್ದು.

21. ಪುನರಾವರ್ತಿತ ವಿದ್ಯಾರ್ಥಿಗಳು ಶುಲ್ಕ ವಿನಾಯಿತಿ ಪಡೆಯಲು ಅರ್ಹರಾಗಿರುವುದಿಲ್ಲ. ಆದರೆ ಎಲ್ಲಾ ಅಭ್ಯರ್ಥಿಗಳು ಪರೀಕ್ಷಾ ವಿನಾಯಿತಿ ಪಡೆಯುವ ಅಭ್ಯರ್ಥಿಗಳು ಸೇರಿದಂತೆ ರೂ. 230/- ಅಂಕಪಟ್ಟಿ ಶುಲ್ಕ ಮತ್ತು ರೂ. 120/- ಆನ್‌ಲೈನ್ ಅಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕವನ್ನು ಪಾವತಿಸತಕ್ಕದ್ದು.

22. ವಿದ್ಯಾರ್ಥಿಗಳಿಂದ ಪಡೆದ ಒಟ್ಟು ಶುಲ್ಕವನ್ನು ಈ ಕೆಳಗಿನ ಕೋಡ್ ಸಂಖ್ಯೆಗಳಲ್ಲಿ ಬ್ಯಾಂಕ್ ಚಲನ್ ಮುಖಾಂತರ ಮಂಗಳೂರು ವಿಶ್ವವಿದ್ಯಾನಿಲಯ ನಿಧಿಗೆ ಪಾವತಿಸತಕ್ಕದ್ದು.

ಅ) ಅರ್ಜಿ ಶುಲ್ಕ ... 008/14

ಆ) ಪರೀಕ್ಷಾ ಶುಲ್ಕ ... 008/23

ಇ) ಅಂಕಪಟ್ಟಿ ಶುಲ್ಕ ... 008/24

23. ಈ ಕೆಳಗೆ ನಮೂದಿಸಿರುವ ತಖ್ತೆಗಳನ್ನು ಮತ್ತು ದಾಖಲೆ ಪತ್ರಗಳನ್ನು ತಪ್ಪದೇ ಈ ಕಛೇರಿಗೆ ದಿನಾಂಕ: ***26.07.2023ರ*** ಒಳಗಾಗಿ ಕಳುಹಿಸಿಕೊಡುವುದು.

ಅ) ಅಭ್ಯರ್ಥನ ಪಟ್ಟಿ - ದ್ವಿಪ್ರತಿಗಳಲ್ಲಿ.

ಆ) ಪುನರಾವರ್ತಿತ ವಿದ್ಯಾರ್ಥಿಗಳ (MU Linx) ಕ್ರೋಢೀಕೃತ ಪರೀಕ್ಷಾ ಶುಲ್ಕವನ್ನು ಪಾವತಿಸಿದ ಒಂದು ಚಲನ್.

ಇ) ಹಣಕಾಸು ತ:ಖ್ತೆ - ಒಂದು ಪ್ರತಿ

ಈ) ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಸಂಖ್ಯೆಯನ್ನು ಸೂಚಿಸುವ ತ:ಖ್ತೆ (ಲಗತ್ತಿಸಲಾದ ನಮೂನೆಯಲ್ಲಿ).

ಉ) ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ / ವರ್ಗ-1 ಹಾಗೂ ಹಿಂದುಳಿದ ವರ್ಗ ಶುಲ್ಕ ವಿನಾಯಿತಿ ಬಗ್ಗೆ ಸರ್ಕಾರಕ್ಕೆ ಕ್ಲೇಮು ಸಲ್ಲಿಸಿದ ಬಿಲ್ಲಿನ ಪ್ರತಿ.

ಊ) ಇತರ ಕಾಲೇಜು/ ವಿಶ್ವವಿದ್ಯಾನಿಲಯಗಳಿಂದ ವರ್ಗಾವಣೆ ಪ್ರವೇಶಾತಿ ಹೊಂದಿದ ವಿದ್ಯಾರ್ಥಿಗಳ ಬಗ್ಗೆ ಪ್ರತ್ಯೇಕ ವಿವರ ಸಲ್ಲಿಸುವುದು.

11/7/2023

**ಕುಲಸಚಿವರು (ಪರೀಕ್ಷಾಂಗ)**

ರಿಗೆ:

1) ಪ್ರಾಂಶುಪಾಲರು, ವಿವೇಕಾನಂದ ಕಾಲೇಜ್ ಆಫ್ ಎಜ್ಯುಕೇಶನ್, ವಿವೇಕನಗರ (ತೆಂಕಿಲ), ಪುತ್ತೂರು–574‌ 1, ದ.ಕ.

2) ಪ್ರಾಂಶುಪಾಲರು, ಆಳ್ವಾಸ್ ಕಾಲೇಜ್ ಆಫ್ ಎಜ್ಯುಕೇಶನ್, ಸುಂದರಿ ಆನಂದ ಆಳ್ವ ಕ್ಯಾಂಪಸ್, ವಿದ್ಯಾಗಿರಿ,ಮೂಡಬಿದ್ರೆ–574227

3) ಪ್ರಾಂಶುಪಾಲರು, ಕರಾವಳಿ ಕಾಲೇಜ್ ಆಫ್ ಎಜ್ಯುಕೇಶನ್, ಕೊಟ್ಟಾರ ಚೌಕಿ ಹತ್ತಿರ, ಮಂಗಳೂರು.13

4) ಪ್ರಾಂಶುಪಾಲರು, ಪ್ರಸನ್ನ ಕಾಲೇಜ್ ಆಫ್ ಎಜ್ಯುಕೇಶನ್, ಉಜಿರೆ, ಬೆಳ್ತಂಗಡಿ. 574 240

5) ಪ್ರಾಂಶುಪಾಲರು, ಮಾರ್ ಇವಾನಿವೋಸ್ ಕಾಲೇಜ್ ಆಫ್ ಎಜ್ಯುಕೇಶನ್, ಕುಂತೂರ, ಪೆರಬೆ, ಪುತ್ತೂರು–574 285.

6) ಪ್ರಾಂಶುಪಾಲರು, ಡಾ. ಟಿ.ಎಂ.ಎ. ಪೈ ಕಾಲೇಜ್ ಆಫ್ ಎಜ್ಯುಕೇಶನ್, ಕುಂಜಿಬೆಟ್ಟು, ಉಡುಪಿ.– 576 102.

7) ಪ್ರಾಂಶುಪಾಲರು, ಸರ್ಕಾರಿ ಶಿಕ್ಷಕ–ಶಿಕ್ಷಣ ಮಹಾವಿದ್ಯಾಲಯ, ಮಂಗಳೂರು– 575 001.

8) ಪ್ರಾಂಶುಪಾಲರು, ಸರ್ವೋದಯ ಕಾಲೇಜ್ ಆಫ್ ಎಜ್ಯುಕೇಶನ್, ಅಂಬಟ್ಟಿ, ವಿರಾಜಪೇಟೆ, ಕೊಡಗು–571 218.

9) ಪ್ರಾಂಶುಪಾಲರು, ಸಂತ ಎಲೋಸಿಯಸ್ ಇನ್ಸ್ಟಿಟ್ಯೂಟ್ ಆಫ್ ಎಜ್ಯುಕೇಶನ್, ಮಂಗಳೂರು – 575 003

10) ಪ್ರಾಂಶುಪಾಲರು, ಪ್ರೇಮಕಾಂತಿ ಕಾಲೇಜ್ ಆಫ್ ಎಜ್ಯುಕೇಶನ್, ಭಂಡಾರ್‌ಕಾರ್ಸ್ ಕಾಂಪ್ಲೆಕ್ಸ್, ಮಣ್ಣಗುಡ್ಡ, ಮಂಗಳೂರು–3.

11) ಪ್ರಾಂಶುಪಾಲರು, ಎಸ್.ಡಿ.ಎಂ. ಕಾಲೇಜ್ ಆಫ್ ಎಜ್ಯುಕೇಶನ್, ಉಜಿರೆ, ಬೆಳ್ತಂಗಡಿ–574 240.

12) ಪ್ರಾಂಶುಪಾಲರು, ಶ್ರೀ ಗೋಕರ್ಣನಾಥೇಶ್ವರ ಕಾಲೇಜ್ ಆಫ್ ಎಜ್ಯುಕೇಶನ್, ಗಾಂಧಿನಗರ, ಮಂಗಳೂರು–575 003.

13) ಪ್ರಾಂಶುಪಾಲರು, ಅಮೃತ ಕಾಲೇಜ್ ಆಫ್ ಎಜ್ಯುಕೇಶನ್, ಪಡೀಲ್, ಮಂಗಳೂರು–15.

14) ಪ್ರಾಂಶುಪಾಲರು, ಲೀಲಾವತಿ ಶೆಟ್ಟಿ ಕಾಲೇಜ್ ಆಫ್ ಎಜ್ಯುಕೇಶನ್, ಕಾವೂರು ಜಂಕ್ಷನ್, ಮಂಗಳೂರು–15.

15) ಪ್ರಾಂಶುಪಾಲರು, ಬ್ಯಾರೀಸ್ ಕಾಲೇಜ್ ಆಫ್ ಎಜ್ಯುಕೇಶನ್, ಕೋಡಿ, ಕುಂದಾಪುರ–576 254.

16) ಪ್ರಾಂಶುಪಾಲರು, ಸಾಯಿ ಶಂಕರ್ ಕಾಲೇಜ್ ಆಫ್ ಎಜ್ಯುಕೇಶನ್, ಪೊನ್ನಂಪೇಟೆ, ಕೊಡಗು – 571 216

***ಪ್ರತಿ :***

1. ಕುಲಸಚಿವರು/ ಹಣಕಾಸು ಅಧಿಕಾರಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
2. ಉಪಕುಲಸಚಿವರು(ಪರೀಕ್ಷಾಂಗ) ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
3. ವಿಶೇಷಾಧಿಕಾರಿ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಘಟಕ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
4. ಸಹಾಯಕ ಕುಲಸಚಿವರು(ಪರೀಕ್ಷಾಂಗ)1 ಮತ್ತು 2, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
5. ಕುಲಪತಿಯವರ ಆಪ್ತ ಕಾರ್ಯದರ್ಶಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
6. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ವಿಶ್ವವಿದ್ಯಾನಿಲಯ ಕಾಲೇಜು ಆವರಣ, ಮಂಗಳೂರು.
7. ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ, ಡಿ.ಸಿ. ಆಫೀಸಿನ ಬಳಿ, ದ.ಕ., ಮಂಗಳೂರು.
8. ಅಧೀಕ್ಷಕರು ಎಸ್.1, ಎಸ್.2, ಎಸ್.3, ಎಸ್.4, ಎಸ್.6.
9. ಸಿಸ್ಟಂ ಅನಾಲಿಸ್ಟ್, ಕಂಪ್ಯೂಟರ್ ವಿಭಾಗ, ಕುಲಸಚಿವ (ಪರೀಕ್ಷಾಂಗ)ರ ಕಛೇರಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
10. ಕುಲಸಚಿವ (ಪರೀಕ್ಷಾಂಗ)ರ ಆಪ್ತ ಸಹಾಯಕರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
11. ಇ.9/ಇ.11/ಇ30 ಕಾರ್ಯನಿರ್ವಾಹಕರು.